# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2393
2. ಮಾನ್ಯ ಸದಸ್ಯರ ಹೆಸರು : ಡಾ:ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 22.03.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಿಂದ ಕಬ್ಬು ಸರಬರಾಜು ಮಾಡಿದ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಹಣ ಪಾವತಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; | 2020-21ನೇ ಹಂಗಾಮಿನಲ್ಲಿ ಬೀದರ್ ಜಿಲ್ಲೆಯ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಎಫ್.ಆರ್.ಪಿ. ದರದಂತೆ ಪೂರ್ಣ ಪ್ರಮಾಣದಲ್ಲಿ ಹಣ ಪಾವತಿಸಿರುತ್ತವೆ. ಆದ್ದರಿಂದ ಯಾವುದೇ ಬಾಕಿ ಇರುವುದಿಲ್ಲ. |
| (ಆ) | ಪ್ರತಿ ಟನ್ ಒಂದಕ್ಕೆ ಎಷ್ಟು ದರ ನಿಗದಿಪಡಿಸಲಾಗಿದೆ; (ವಿವರ ನೀಡುವುದು) | 2020-21ನೇ ಸಕ್ಕರೆ ಹಂಗಾಮಿಗೆ ಕೇಂದ್ರ ಸರ್ಕಾರವು ಈ ಕೆಳಗಿನಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು (Fair and Remunerative Price) ನಿಗದಿಪಡಿಸಿದೆ.<br><br>1. ಶೇ. 10.00 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಮೆಟ್ರಿಕ್ ಟನ್ ಕಬ್ಬಿಗೆ ರೂ.2850/-<br>2. ಶೇ. 10.00ಕ್ಕೆ ಮೇಲ್ಪಟ್ಟು ಇಳುವರಿಗೆ ನಂತರದ ಶೇಕಡ 1 ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.285/- ರಂತೆ ಹೆಚ್ಚುವರಿ ಬೆಲೆ.<br>3. ಶೇ. 10.00 ಕ್ಕಿಂತ ಕಡಿಮೆ ಹಾಗೂ ಶೇ. 9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಶೇ. 1 ರಷ್ಟು ಇಳುವರಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.285/-ರ ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು<br>4. ಶೇ. 9.5 ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆಟ್ರಿಕ್ ಟನ್‌ಗೆ ರೂ.2708.00 ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ.<br><br>2020-21ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ 4 ಸಕ್ಕರೆ ಕಾರ್ಖಾನೆಗಳು ಕಾರ್ಯ ನಿರ್ವಹಿಸಿದ್ದು, ಅವುಗಳ ಇಳುವರಿಯು ಶೇ.9.5 ಕ್ಕಿಂತ ಕಡಿಮೆ ಇರುವುದರಿಂದ ಪ್ರತಿ ಟನ್ ಕಬ್ಬಿಗೆ ಎಕ್ಸ-ಗೇಟ್ ದರ ರೂ.2708/- ಗಳನ್ನು ನ್ಯಾಯ ಮತ್ತು ಲಾಭದಾಯಕ ಬೆಲೆಯಾಗಿ ನಿಗದಿಪಡಿಸಲಾಗಿದೆ. |
| (ಇ) | ಹಣ ಪಾವತಿಸದ ಕಾರ್ಖಾನೆಗಳ ವಿರುದ್ಧ ಸರ್ಕಾರ ಮತ್ತು ಜಿಲ್ಲಾಡಳಿತ ಕೈಗೊಂಡ ಕ್ರಮವೇನು; | 2020-21ನೇ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಸಕ್ಕರೆ ಕಾರ್ಖಾನೆಗಳು ಎಫ್.ಆರ್.ಪಿ. ದರದಂತೆ ಪೂರ್ಣ ಪ್ರಮಾಣದಲ್ಲಿ ಹಣ ಪಾವತಿಸಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ. |
| (ಈ) | ಯಾವ ಕಾಲಮಿತಿಯೊಳಗೆ ರೈತರಿಗೆ ಹಣ ಪಾವತಿ ಮಾಡಲಾಗುವುದು? | ಮೇಲಿನ ವಿವರಣೆಯ ಹಿನ್ನಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ: ಸಿಐ 43 ಎಸ್‌ಜಿಎಫ್ 2022

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| | | |
|---|---|---|
| | | ಸಾಂಕ್ರಾಮಿಕ ರೋಗಗಳ ವಿರುದ್ಧ ಲಸಿಕೆ ಹಾಕುವ ಕಾರ್ಯಕ್ರಮದ ಅಂಗವಾಗಿ ಕರ ಪತ್ರಗಳು / ಭಿತ್ತಿ ಪತ್ರಗಳ ಮೂಲಕ ಪ್ರಚಾರ ಮಾಡಲಾಗುತ್ತಿದೆ.<br><br>ಇಲಾಖೆಯ ತರಬೇತಿ ಕೇಂದ್ರಗಳಲ್ಲಿ ರೈತರಿಗೆ / ಜಾನುವಾರು ಸಾಕಾಣಿಕೆದಾರರಿಗೆ ರೋಗ ತಹಬಂದಿ ಮತ್ತು ರೋಗಲಕ್ಷಣಗಳ ಬಗ್ಗೆ ತರಬೇತಿ ನೀಡಲಾಗುತ್ತಿದೆ.<br><br>ಇಲಾಖೆಯಲ್ಲಿನ 16 ತರಬೇತಿ ಕೇಂದ್ರಗಳಲ್ಲಿ ರೈತರಿಗೆ ವೈಜ್ಞಾನಿಕ ಹೈನುಗಾರಿಕೆ, ಕುರಿ / ಮೇಕೆ ಸಾಕಾಣಿಕೆ, ಹಂದಿ ಸಾಕಾಣಿಕೆ, ಮತ್ತು ಕೋಳಿ ಸಾಕಾಣಿಕೆ, ಕುರಿತಂತೆ 2 ದಿನಗಳ ತರಬೇತಿಯನ್ನು ನಿಯಮಿತವಾಗಿ ಹಮ್ಮಿಕೊಳ್ಳಲಾಗುತ್ತಿದೆ. |

**ಇ–ಪಸಂಮೀ 107 ಸಲೆವಿ 2022**

(ಪ್ರಭು ಬಿ. ಚವ್ಹಾಣ್)
ಪಶುಸಂಗೋಪನೆ ಸಚಿವರು